**<u>ದಿನಾಂಕ 18.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು .</u>**

**<u>ಮುಖ್ಯ ವಿಚಾರಣೆಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ .

**<u>ಪಾಟೀ ಸವಾಲುಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ಅಪಘಾತವಾದ ದಿನಾಂಕಂದು ಆಪಾದಿತ ವಾಹನದ ಮಾಲೀಕ ನಾನೇ ಎಂದರೆ ಸರಿಯಲ್ಲ. ವಾಹನ ಬದಲಾವಣೆಗೆ ಸಂಬಂಧಪಟ್ಟಂತೆ ನಾನು ದಾಖಲಾತಿಗಳನ್ನು **3**ನೇ ಎದುರುದಾರರ ಪರ ಬರೆದುಕೊಟ್ಟಿರುತ್ತೇನೆ. ಸದರಿ ದಾಖಲಾತಿಗಳನ್ನು ನಾನು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಕಛೇರಿಗೆ ಸಲ್ಲಿಸಿರುವುದಿಲ್ಲ, **3**ನೇ ಎದುರುದಾರರು ವಾಹನ ದಾಖಲಾತಿಗಳನ್ನು ಬದಲಾವಣೆ ಮಾಡಿಕೊಳ್ಳುವುದಾಗಿ ತಿಳಿಸಿದ್ದರು. ಅಪಘಾತವಾದ ದಿನಾಂಕದಂದು ವಾಹನದ ದಾಖಲಾತಿ ನನ್ನ ಹೆಸರಿನಲ್ಲಿ ಇದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾಹನದ ಆರ್.ಸಿ ಪುಸ್ತಕವನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ದಾಖಲಾತಿಗಳನ್ನು **3**ನೇ ಎದುರುದಾರರಿಗೆ ನೀಡಿರುತ್ತೇನೆ ಎಂದು ನುಡಿಯುತ್ತಾರೆ. ಇಂದಿಗೂ ಸಹ ದಾಖಲಾತಿಗಳ ರೀತ್ಯ ನಾನೇ ವಾಹನದ ಮಾಲೀಕ ಎಂದರೆ ಸರಿಯಲ್ಲ. ವಾಹನದ ದಾಖಲಾತಿಗಳ ಬದಲಾವಣೆ ಬಗ್ಗೆ ಸಂಬಂಧಪಟ್ಟ ಸಾರಿಗೆ ಕಛೇರಿಯಲ್ಲಿ ವಿಚಾರಣೆ ಮಾಡಿರುತ್ತೇನೆ. ಪರಿಹಾರ ಪಾವತಿಸುವ ಜವಾಬ್ದಾರಿಯಿಂದ ತಪ್ಪಿ ಸಿಕೊಳ್ಳಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**3**ನೇ ಎದುರುದಾರರ ಪರ ಮಾನ್ಯ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**